Phone No.: 0831-2565203,206,234

# ರಾಣಿ ಚನ್ನಮ್ಮ ವಿಶ್ವವಿದ್ಯಾಲಯ

ವಿದ್ಯಾಸಂಗಮ, ರಾಷ್ಟ್ರೀಯ ಹೆದ್ದಾರಿ – 04, ಭೂತರಾಮನಹಟ್ಟಿ, ಬೆಳಗಾವಿ – 591156

# RANI CHANNAMMA UNIVERSITY,

Vidyasangama, National Highway – 04, Belagavi – 591156

E-mail: rcuregistrar@gmail.com ಕುಲಸಚಿವರ ಕಾರ್ಯಾಲಯ Website: www.rcub.ac.in

ಕ್ರ.ಸಂ.: ರಾಚವಿ/ಬೆಳಗಾವಿ/ಕುಸಕಾ/2020–21/520 ದಿನಾಂಕ: 10–06–2020.

## ಸುತ್ತೋಲೆ

ವಿಷಯ: ಬೋಧಕ ಸಿಬ್ಬಂದಿಗಳಿಗೆ ರಜೆ ಘೋಷಿಸುವ ಕುರಿತು.

ಉಲ್ಲೇಖ: 1. Ministry of Home Affairs letter No.40-3/2020-DM-I(A) Dated: 17-05-2020.
2. ಅಪರ ಮುಖ್ಯ ಕಾರ್ಯದರ್ಶಿಯವರ ಕಛೇರಿ ಉನ್ನತ ಶಿಕ್ಷಣ ಇಲಾಖೆ ಪತ್ರ ಸಂ.ಇಡಿ ದಿನಾಂಕ:05–06–2020.
3. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:10–06–2020.

ಮೇಲ್ಕಾಣಿಸಿದ ವಿಷಯ ಹಾಗೂ ಉಲ್ಲೇಖಗಳನ್ವಯ, ಯು.ಜಿ.ಸಿ. ಮತ್ತು ಕೇಂದ್ರ ಗೃಹ ಮಂತ್ರಾಲಯ ಹೊರಡಿಸುವ ಮಾರ್ಗಸೂಚಿಗಳ ಹಿನ್ನೆಲೆಯಲ್ಲಿ ದಿನಾಂಕ:01.06.2020 ರಂದು ಉನ್ನತ ಶಿಕ್ಷಣ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ರಾಜ್ಯದ ಎಲ್ಲ ವಿಶ್ವವಿದ್ಯಾಲಯಗಳ ಕುಲಪತಿಗಳು ಕಾಲೇಜು ಶಿಕ್ಷಣ ಇಲಾಖೆಯ ಆಯುಕ್ತರು ಮತ್ತು ಉನ್ನತ ಶಿಕ್ಷಣ ಪರಿಷತ್ತಿನ ಕಾರ್ಯನಿರ್ವಾಹಕ ನಿರ್ದೇಶಕರೊಂದಿಗೆ ನಡೆದ ವಿಡಿಯೋ ಕಾನ್ಫರೆನ್ಸ್ ಸಭೆಯಲ್ಲಿ ಚರ್ಚಿಸಿದಂತೆ ಸ್ನಾತಕ ಹಾಗೂ ಸ್ನಾತಕೋತ್ತರ ವಿಭಾಗಗಳಲ್ಲಿ ಬಾಕಿ ಉಳಿದ ಪಠ್ಯಕ್ರಮವನ್ನು ಜೂನ್ 15, 2020ರವರೆಗೆ ಆನ್‌ಲೈನ್ ಮೂಲಕ ತರಗತಿಗಳನ್ನು ಮುಂದುವರೆಸಿ ಪೂರ್ಣಗೊಳಿಸಲು ಮತ್ತು ಬೋಧಕ ಸಿಬ್ಬಂದಿಗಳಿಗೆ ಜೂನ್ 16, 2020 ರಿಂದ ಜೂನ್ 30, 2020 ರವರೆಗೆ ರಜೆ ಘೋಷಿಸಲಾಗಿದೆ.

ಮುಂದುವರೆದು, ಯು.ಜಿ.ಸಿ. ಮತ್ತು ಭಾರತ ಸರ್ಕಾರದ ಕೇಂದ್ರ ಗೃಹ ಮಂತ್ರಾಲಯವು ಜೂನ್–2020ರ ಕೊನೆಯ ವಾರದಲ್ಲಿ ಹೊಸ ಮಾರ್ಗಸೂಚಿಗಳನ್ನು ಹೊರಡಿಸುವುದರಿಂದ ಈ ಮಧ್ಯೆ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳು, ಪೋಷಕರು ಮತ್ತು ಅಧ್ಯಾಪಕರುಗಳಿಂದ ಪರೀಕ್ಷೆಗಳನ್ನು ನಡೆಸುವುದರ ಕುರಿತು, ಮೌಲ್ಯಮಾಪನ ಮತ್ತು ವಿದ್ಯಾಸಂಸ್ಥೆಗಳನ್ನು ಪುನರಾರಂಭಿಸುವ ಬಗ್ಗೆ ಈ ಕೆಳಕಾಣಿಸಿದ ಲಿಂಕ್ ತೆರೆದು ಲಭ್ಯವಿರುವ ನಮೂನೆಯಲ್ಲಿ ದಿನಾಂಕ:20–06–2020 ರೊಳಗಾಗಿ ಅಭಿಪ್ರಾಯಗಳನ್ನು ನೀಡಲು ಸೂಚಿಸಲಾಗಿದೆ. ಸರ್ಕಾರ ಮತ್ತು ಯು.ಜಿ.ಸಿ. ಹೊರಡಿಸುವ ಮಾರ್ಗಸೂಚಿಗಳನ್ವಯ ಮುಂದಿನ ಕ್ರಮಗಳ ಕುರಿತು ಮಾಹಿತಿ ನೀಡಲಾಗುವುದೆಂದು ಈ ಮೂಲಕ ತಿಳಿಸಲಾಗಿದೆ.

Link: https://forms.gle/TgbaxfbRgoBrQWJXA

**ಸಹಿ/–**

**ಕುಲಸಚಿವರು**

**ಇವರಿಗೆ,**

1. ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಎಲ್ಲ ಸಂಯೋಜಿತ ಮಹಾವಿದ್ಯಾಲಯಗಳ ಪ್ರಾಂಶುಪಾಲರುಗಳಿಗೆ.

**ಪ್ರತಿ ಮಾಹಿತಿಗಾಗಿ,**

1. ಮಾನ್ಯ ಕುಲಪತಿಗಳ ಆಪ್ತಕಾರ್ಯದರ್ಶಿಗಳು, ಕುಲಪತಿಗಳ ಸಚಿವಾಲಯ, ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ
2. ರಕ್ಷಾಪ್ರತಿ.